## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ಶ್ರೀರಂಗಪಟ್ಟಣ

## ಸಿ.ಸಿ.341/2016

| | |
|---|---|
| ಸಿ.ಡಬ್ಲ್ಯೂ : | 4 |
| ಪಿ.ಡಬ್ಲ್ಯೂ : | 1 |

| | | |
|---|---|---|
| ಸಾಕ್ಷಿದಾರರ ಹೆಸರು | : | ಅನಿಲ್ ಕುಮಾರ್ |
| ತಂದೆ/ ಪತಿಯ ಹೆಸರು | : | ರಾಮೇಗೌಡ |
| ವಯಸ್ಸು | : | 41 ವರ್ಷ |
| ವೃತ್ತಿ | : | ವ್ಯವಸಾಯ |
| ವಾಸ | : | ಗೆಂಡೆ ಹೊಸಹಳ್ಳಿ |

**ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕ: 02.09.2025**

**ಮುಖ್ಯ ವಿಚಾರಣೆ: ಮಾನ್ಯ ಎ ಪಿ ಪಿ ರವರಿಂದ**

ನನಗೆ ಚಾಸಾ-1 ಮತ್ತು 2 ರವರ ಪರಿಚಯ ಇರುತ್ತದೆ. ನನಗೆ ಆರೋಪಿತರ ಪರಿಚಯ ಇರುತ್ತದೆ. ಸುಮಾರು 10 ವರ್ಷಗಳ ಹಿಂದೆ ಚಾಸಾ.1 ರವರ ಗಂಡ ಮನೆ ಕಟ್ಟುತ್ತಿದ್ದ ಸಂದರ್ಭದಲ್ಲಿ ಬಾಗಿಲನ್ನು ಇಡುವ ಸಂದರ್ಭದಲ್ಲಿ ಚಾಸಾ.2 ಮತ್ತು ಆರೋಪಿತರ ನಡುವೆ ಜಗಳ ಆಗಿರುತ್ತದೆ. ಮರಿಗೌಡ, ಗೋಪಾಲ ಹಾಗೂ ಸುರೇಶ್ ರವರಿಗೆ ಗುರುರವರಿಗೆ ಇಟಿಟಗೆಯಿಂದ ಹೊಡೆದಿರುತ್ತಾರೆ. ಆಗ ಗುರುರವರು ಜ್ಞಾನ ತಪ್ಪಿ ಕೆಳಗೆ ಬಿದ್ದಿರುತ್ತಾರೆ. ನಂತರ ಸುಂದರ್ ರವರು ಗುರುರವರನ್ನು ಮೈಸೂರಿನ ಕೆ.ಆರ್.ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ. ಈ ಘಟನೆ ಸಂಬಂಧ ನಾನು ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ.

(ಈ ಹಂತದಲ್ಲಿ ಮಾನ್ಯ ಸ.ಸ.ಅ. ಅವರು ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡುವಂತೆ ಕೋರಿಕೊಂಡಿದ್ದು, ಆಲಿಸಿ ಅನುಮತಿ ನೀಡಲಾಯಿತು)

ಪಾಟಿ ಸವಾಲು: ಮಾನ್ಯ ಸ.ಸ.ಅ ರವರಿಂದ

ಆರೋಪಿತರು ಸೌಮ್ಯರವರಿಗೆ ಅವ್ಯಾಚ ಶಬ್ದಗಳಿಂದ ಬೈದಿರುತ್ತಾರೆ ಎಂದರೆ ಸರಿ. ಆರೋಪಿತರು ಸೌಮ್ಯರವರನ್ನು ಹಿಡಿದು ಎಳೆದಾಡಿ ಸಾರ್ವಜನಿಕವಾಗಿ ಅಪಮಾನ

ಮಾಡಿರುತ್ತಾರೆ ಎಂದರೆ ಸರಿ. ಮರಿಗೌಡ ಹಾಗೂ ಸುರೇಶ್ ರವರು ಸದರಿ ಜಗಳವನ್ನು ಬಿಡಿಸಿರುತ್ತಾರೆ ಎಂದರೆ ಸರಿ. ಗೋಪಾಲ್ ರವರು ಇಟ್ಟಿಗೆ ಚೂರಿನಿಂದ ಗುರುರವರ ಎದೆಗೆ ಹೊಡೆದಿರುತ್ತಾರೆ ಎಂದರೆ ಸರಿ.

ಪಾಟೀಸವಾಲು ಃ ಆರೋಪಿ ಪರ ವಕೀಲರಿಂದ

ಆರೋಪಿ ಪರ ವಕೀಲರು ಗೈರು ಹಾಜರಾಗಿದ್ದು ಪಾಟೀ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.